# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 250 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 02.02.2021 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ದಾರರಿಗೆ ಎಷ್ಟು ಪ್ರಮಾಣದಲ್ಲಿ ದವಸ ಧಾನ್ಯಗಳು ಹಾಗೂ ಇನ್ನಿತರ ವಸ್ತುಗಳನ್ನು ವಿತರಿಸಲಾಗಿದೆ; | ಪ್ರತಿ ತಿಂಗಳು ಆದ್ಯತಾ(ಬಿ.ಪಿ.ಎಲ್) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ ಹಾಗೂ ಪ್ರತಿ ಪಡಿತರ ಚೀಟಿಗೆ 2 ಕೆ.ಜಿ ಗೋಧಿಯನ್ನು ಮತ್ತು ಅಂತ್ಯೋದಯ ಪಡಿತರ ಚೀಟಿಗೆ 35 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ.<br>ಆದ್ಯತೇತರ(ಎ.ಪಿ.ಎಲ್) ಪಡಿತರ ಚೀಟಿಯನ್ನು ಹೊಂದಿರುವ ಏಕ ಸದಸ್ಯ ಪಡಿತರ ಚೀಟಿಗೆ ಪ್ರತಿ ಸದಸ್ಯರಿಗೆ 5 ಕೆ.ಜಿ ಅಕ್ಕಿ, ಹಾಗೂ ಎರಡು ಹಾಗೂ ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ. ಅಕ್ಕಿಯನ್ನು ಪ್ರತಿ ಕೆ.ಜಿ.ಗೆ ರೂ.15/-ರ ಸಬ್ಸಿಡಿ ದರದಲ್ಲಿ ವಿತರಿಸಲಾಗುತ್ತಿದೆ.<br>ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಗ್ಯಾಸ್ ಸಂಪರ್ಕವನ್ನು ಹೊಂದಿರದ ಪಡಿತರ ಚೀಟಿಗೆ ಪ್ರತಿ ತಿಂಗಳು 3 ಲೀ. ಸೀಮೆಎಣ್ಣೆ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಅನಿಲ ಸಹಿತ ಪಡಿತರ ಚೀಟಿಯನ್ನು ಹೊಂದಿದ್ದು, ಸೀಮೆಎಣ್ಣೆಯನ್ನು ಪಡೆಲು ಒಪ್ಪಿಗೆ ನೀಡುವವರಿಗೆ 1 ಲೀ. ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ. |
| ಆ | ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು; | ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ:<br>ಅಂತ್ಯೋದಯ (ಎಎವೈ): 10,92,292<br>ಆದ್ಯತಾ (ಬಿಪಿಎಲ್): 1,17,00,391<br>ಒಟ್ಟು: 1,27,92,683 |
| ಇ | ಹಣವಂತರು ಬಿ.ಪಿ.ಎಲ್ ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು? | ಇಲಾಖೆಯಿಂದ ಅನರ್ಹ ಬಿಪಿಎಲ್ ಪಡಿತರ ಚೀಟಿಗಳನ್ನು ನಿರಂತರವಾಗಿ ಪತ್ತೆ ಹಚ್ಚಿ ರದ್ದು ಪಡಿಸಲಾಗುತ್ತಿದೆ. ರಾಜ್ಯದಲ್ಲಿಕಳೆದ 3 ವರ್ಷಗಳಲ್ಲಿ ಒಟ್ಟು2,28,188 ಅನರ್ಹ ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ರದ್ದು ಪಡಿಸಲಾಗಿರುತ್ತದೆ. |

ಆನಾಸ 32 ಡಿಆರ್ ಎ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.